25

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ "ಚಾಮರಾಜನಗರ ಜಿಲ್ಲೆ ಮಲೈ ಮಹದೇಶ್ವರ ವನ್ಯಜೀವಿ ಧಾಮದ ವ್ಯಾಪ್ತಿಯ ಮೀಣ್ಯಂ ಅರಣ್ಯದಲ್ಲಿ ಸಂಭವಿಸಿದ ಐದು ಹುಲಿಗಳ ಧಾರುಣ ಸಾವು ಮತ್ತು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕೆನ್ನುವ ವಿಷಯದ ಕುರಿತು ಗಮನ ಸೆಳೆಯುವ ಸೂಚನೆಗೆ ಸನ್ಮಾನ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ.**

*******

ಚಾಮರಾಜನಗರ ಜಿಲ್ಲೆಯ ಮಲೈ ಮಹದೇಶ್ವರ ವನ್ಯಜೀವಿ ಧಾಮದ ಹೂಗ್ಯಂ ವಲಯದ ಮೀಣ್ಯಂ ಅರಣ್ಯ ಪ್ರದೇಶದಲ್ಲಿ ದಿನಾಂಕಃ 26.06.2025 ರಂದು ಕ್ಷೇತ್ರ ಸಿಬ್ಬಂದಿಗಳು ಗಸ್ತು ಕಾರ್ಯದಲ್ಲಿ ತೊಡಗಿರುವಾಗ ಐದು ಹುಲಿಗಳು ಮೃತಪಟ್ಟಿರುವುದು ಕಂಡುಬಂದಿರುತ್ತದೆ. ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.

ಹಸುವಿನ ಮೃತದೇಹಕ್ಕೆ ವಿಷಪ್ರಾಶನ ಮಾಡಿ, ಹುಲಿಗಳ ಸಾವಿಗೆ ಕಾರಣಾರಾದ ಪ್ರಮುಖ ಆರೋಪಿಗಳನ್ನು ಘಟನೆ ಪತ್ತೆ ಹಚ್ಚಿದ 48 ಗಂಟೆಗಳ ಒಳಗಡೆ ಬಂಧಿಸಿ, ವನ್ಯಜೀವಿ ಅಪರಾಧ ಪ್ರಕರಣ WLOR ಸಂಖ್ಯೆ.2/2025-26 ಅನ್ನು ದಾಖಲಿಸಲಾಗಿರುತ್ತದೆ.

ಪ್ರಕರಣ ಸಂಭವಿಸಿದ ಆಡಳಿತ ವ್ಯಾಪ್ತಿಯ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿಗಳನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಬೆಂಗಳೂರು ರವರ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಕೆಎಫ್‌ಡಿ/ಅಪಮು/ಎ1/ಭಾಅಸೇ)/2-2022, ಪಿಎನ್‌ಆರ್-ಕೆಎಫ್‌ಡಿ, ದಿನಾಂಕಃ30.06.2025 ರನ್ವಯ ಕಡ್ಡಾಯ ರಜೆಯ ಮೇಲೆ ಕಳುಹಿಸಲಾಗಿರುತ್ತದೆ.

ಎಂಎಂ ಹಿಲ್ಸ್ ವನ್ಯಜೀವಿ ವಿಭಾಗದ ಹೂಗ್ಯಂ ವನ್ಯಜೀವಿ ವಲಯ ವ್ಯಾಪ್ತಿಯಲ್ಲಿ ಹುಲಿ ಮತ್ತು ನಾಲ್ಕು ಮರಿಗಳ ಸಾವಿನ ತನಿಖೆಗಾಗಿ ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದ ಪ್ರತಿನಿಧಿಯನ್ನು ಒಳಗೊಂಡ ಉನ್ನತ ಮಟ್ಟದ ತನಿಖಾ ಸಮಿತಿಯನ್ನು ದಿನಾಂಕ:27.06.2025 ರಂದು ರಚಿಸಲಾಗಿರುತ್ತದೆ.

ಉನ್ನತ ಮಟ್ಟದ ತನಿಖಾ ಸಮಿತಿಯು ಪ್ರಕರಣಕ್ಕೆ ಸಂಬಂಧಿಸಿದಂತೆ, ಸ್ಥಳಕ್ಕೆ ಭೇಟಿ ನೀಡಿ ವಾಸ್ತವಾಂಶ ಮತ್ತು ದಾಖಲಾತಿಗಳ ಪರಿಶೀಲನೆ ನಡೆಸಿ, ಸಲ್ಲಿಸಿರುವ ಮಧ್ಯಂತರ ವರದಿಯನ್ನು ದಿನಾಂಕಃ 04.07.2025 ರಂದು ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.

ಉನ್ನತ ಮಟ್ಟದ ತನಿಖಾ ಸಮಿತಿಯ ಮಧ್ಯಂತರ ವರದಿ ಆಧಾರದ ಮೇಲೆ ಆಡಳಿತ ವ್ಯಾಪ್ತಿಯ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿಗಳನ್ನು ದಿನಾಂಕಃ 04.07.2025 ರಲ್ಲಿ ಸರ್ಕಾರವು ಅಮಾನತುಗೊಳಿಸಿ ಆದೇಶಿಸಲಾಗಿರುತ್ತದೆ ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿ ಇವರನ್ನು ಅಮಾನತ್ತುಗೊಳಿಸುವಂತೆ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಶಿಫಾರಸ್ಸು ಮಾಡಲಾಗಿರುತ್ತದೆ. ಅದರನ್ವಯ ಸರ್ಕಾರದ ಆದೇಶ ಸಂಖ್ಯೆಃ ಡಿಪಿಎಆರ್ 124 ಎಸ್‌ಎಫ್‌ಪಿ 2025, ದಿನಾಂಕಃ 14.07.2025 ರಂದು ಅಮಾನತ್ತುಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ.

ಹುಲಿಗಳ ಸಾವಿಗೆ ಸಂಬಂಧಿಸಿದ ಎಫ್‌ಎಸ್‌ಎಲ್ ವರದಿಯು ಸ್ವೀಕೃತಿಯಾಗಿರುತ್ತದೆ. ಇದರನ್ವಯ ಕಾರ್ಬೋಫ್ಯೂರಾನ್ ಕೀಟನಾಶಕವನ್ನು ಮೃತ ಹಸುವಿಗೆ ಸಿಂಪಡಿಸಿರುವ ಕಾರಣ, ಹುಲಿಗಳು ಸಾವನ್ನಪ್ಪಿರುತ್ತವೆ. ಸದರಿ ವರದಿಯನ್ವಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಂದಿನ ತನಿಖೆಯನ್ನು ಕೈಗೊಳ್ಳಲಾಗುತ್ತಿದೆ.

...2

ಉನ್ನತ ಮಟ್ಟದ ತನಿಖಾ ಸಮಿತಿಯು ದಿನಾಂಕ: 10.07.2025 ರಲ್ಲಿ ಸಲ್ಲಿಸಿರುವ ಅಂತಿಮ ವರದಿಯ ಶಿಫಾರಸ್ಸಿನನ್ವಯ ಮಲೈಮಹದೇಶ್ವರ ವನ್ಯಜೀವಿ ಹಾಗೂ ಚಾಮರಾಜನಗರ ಜಿಲ್ಲೆಯ ಇತರೆ ಅರಣ್ಯ ಪ್ರದೇಶಕ್ಕೆ ಹೊರರಾಜ್ಯದಿಂದ ಮೇಯಲು ಬರುವ ಜಾನುವಾರುಗಳನ್ನು ತಡೆಗಟ್ಟಲು ಜಿಲ್ಲಾಡಳಿತದೊಂದಿಗೆ ಸಮಾಲೋಚಿಸಿ ನಿರ್ಬಂಧ ಆದೇಶವನ್ನು (Ban) ಹೊರಡಿಸಲು ಅರಣ್ಯ ಇಲಾಖೆಯಿಂದ ತಿಳಿಸಲಾಗಿದ್ದು, ಅದರನ್ವಯ ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಅಪಜೀ 172 ಎಫ್‌ಡಬ್ಲ್ಯೂಎಲ್ 2025**

(ಈಶ್ವರ ಬಿ. ಖಂಡ್ರೆ)
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು